ಕರ್ನಾಟಕ ಸರ್ಕಾರ

ಸಂಖ್ಯೆ:ಹಿಂವಕಇ:ಮಾಶಾ-1:ಸಿಆರ್-04:2006-07

ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು,
ದಿನಾಂಕ: 03-6-2006.

**ಸುತ್ತೋಲೆ**

ವಿಷಯ:- ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ ಅನುಸರಿಸಬೇಕಾದ ವಿಧಿ-ವಿಧಾನ ಪಾಲಿಸುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ:132:ಸಕಇ:ಎಸ್.ಎ.ಡಿ.97 ದಿನಾಂಕ: 8-2-2000.

**********

ಸರ್ಕಾರವು ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಭಾರತ ಸಂವಿಧಾನದ ಅನುಚ್ಛೇದ 15(4) ಶಿಕ್ಷಣಕ್ಕಾಗಿ ಹಾಗೂ 16(4) ಉದ್ಯೋಗಕ್ಕಾಗಿ ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಸದರಿ ಮೀಸಲಾತಿಯನ್ನು ಪಡೆಯುವ ಸಲುವಾಗಿ ಜಾತಿ:ಆದಾಯ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರುಗಳ ಮುಖಾಂತರ ಪಡೆದುಕೊಳ್ಳಬೇಕಾಗುತ್ತದೆ.

ಸರ್ಕಾರದ ಉಲ್ಲೇಖಿತ ದಿನಾಂಕ: 8-2-2000 ಅಧಿಸೂಚನೆಯಲ್ಲಿ ಸರ್ಕಾರವು ಕರ್ನಾಟಕ ಅನುಸೂಚಿತ ಜಾತಿ/ಅನುಸೂಚಿತ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳು (ನೇಮಕಾತಿ, ಮೀಸಲಾತಿ ಇತ್ಯಾದಿ) ನಿಯಮ 1992 ಕ್ಕೆ ತಿದ್ದುಪಡಿಯಾಗಿದ್ದು, ನಿಯಮ 3(ಎ), 3(ಬಿ) ಮತ್ತು 3(ಸಿ) ನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿರುತ್ತದೆ. ನಿಯಮ 3(ಎ) ರನ್ವಯ ಸಂಬಂಧಪಟ್ಟ ತಹಶೀಲ್ದಾರರುಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ವಿತರಿಸುವಲ್ಲಿ ಪಾಲಿಸಬೇಕಾದ ವಿಧಿ ವಿಧಾನವನ್ನು ವಿವರವಾಗಿ ತಿಳಿಸಲಾಗಿರುತ್ತದೆ. ಆದಾಗ್ಯೂ, ಅಭ್ಯರ್ಥಿಗಳು ನೀಡುವ ಮಾಹಿತಿಗಳನ್ವಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತಿದ್ದು, ಬಹಳಷ್ಟು ಪ್ರಕರಣಗಳಲ್ಲಿ ಸುಳ್ಳು ಮಾಹಿತಿ ನೀಡಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆಯುತ್ತಿರುವುದು ಬೆಳಕಿಗೆ ಬಂದಿರುತ್ತದೆ. ಸುಳ್ಳು ಜಾತಿ:ಆದಾಯ ಪ್ರಮಾಣ ಪತ್ರಗಳನ್ನು ನೀಡಿರುವ ಅಧಿಕಾರಿಗಳ ಬಗ್ಗೆ ಕೈಗೊಂಡಿರುವ ಕ್ರಮದ ಬಗ್ಗೆ ಕುರಿತಂತೆ ವಿಧಾನ ಮಂಡಲದ ಉಭಯ ಸದನಗಳಲ್ಲಿ ಪ್ರಶ್ನೆಗಳನ್ನು ಕೇಳಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರದ ದಿನಾಂಕ:8-2-2000 ರ ಅಧಿಸೂಚನೆಯ ~~ಪ್ರತಿಯನ್ನು, ಈ ಪತ್ರಕ್ಕೆ ಲಗತ್ತಿಸಿ ಕಳುಹಿಸುತ್ತಾ~~ ಜಾತಿ ಪ್ರಮಾಣ ಪತ್ರ ವಿತರಿಸುವ ಕುರಿತಂತೆ ನಿಯಮ 3(ಎ)ನಲ್ಲಿ ವಿವರಿಸಿರುವ ವಿಧಿ-ವಿಧಾನಗಳನ್ನು ಓದಿಕೊಂಡು ಪ್ರಮಾಣ ಪತ್ರಗಳನ್ನು ವಿತರಿಸಲು ಸೂಕ್ತ ಕ್ರಮಕೈಗೊಳ್ಳಲು ಈ ಮೂಲಕ ಸೂಚಿಸಿದೆ.

ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ವಿತರಿಸುವ ಬಗ್ಗೆ ಸರ್ಕಾರದಿಂದ ಹೊರಡಿಸಲಾದ ಹಾಗೂ ಹೊರಡಿಸಲಾಗುವ ಸುತ್ತೋಲೆ, ಆದೇಶ ಹಾಗೂ ನಿಯಮಗಳ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಹಾಗೂ ಯಾವುದೇ ಕಾರಣಕ್ಕೂ ದುರುಪಯೋಗವಾಗದಂತೆ ಮುಂಜಾಗ್ರತ ಕ್ರಮವನ್ನು ಅನುಸರಿಸಲು ಮತ್ತೊಮ್ಮೆ ಸೂಚಿಸಿದೆ.

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳಿಗೆ ಹಾಗೂ ರಾಜ್ಯದ ಎಲ್ಲಾ ತಾಲ್ಲೂಕಿನ ತಹಶೀಲ್ದಾರರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.